# OCTOBER 24, 2025

# AKASHAVANI - DHARWAD

# PRADESH SAAMACHARA (KANNADA) 12 PM

<><><>

ಚಿಕ್ಕಬಳ್ಳಾಪುರ ಜಿಲ್ಲೆ, ಬಾಗೇಪಲ್ಲಿಯ ಮೂರು ಕಡೆಗಳಲ್ಲಿ, ಕರ್ನಾಟಕ ಪಬ್ಲಿಕ್ ಶಾಲೆಗಳನ್ನು, 4 ಕೋಟಿ ರೂಪಾಯಿ ವೆಚ್ಚದಲ್ಲಿ ಸ್ಥಾಪಿಸಲು, ಸರ್ಕಾರ ಅನುಮತಿಸಿದೆ ಎಂದು ಬಾಗೇಪಲ್ಲಿ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ತಿಳಿಸಿದ್ದಾರೆ. ಒಂದೇ ಸೂರಿನಡಿ, ಹೊಸ ಪಬ್ಲಿಕ್ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕದಿಂದ ಪದವಿಪೂರ್ವ ಹಂತದವರೆಗೆ 30 ವಿದ್ಯಾರ್ಥಿಗಳಿಗೆ ಪ್ರವೇಶಾತಿ ದೊರೆಯಲಿದೆ ಎಂದರು.

<><><>

ಉದ್ಯೋಗಿನಿ ಯೋಜನೆಯಡಿ ಸಾಲ ಬಯಸಿ ಬ್ಯಾಂಕ್‌ಗಳಿಗೆ ಅರ್ಜಿ ಸಲ್ಲಿಸುವ ವಿಮುಕ್ತ ದೇವದಾಸಿಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ಆದ್ಯತೆಯ ಮೇಲೆ ಹಣಕಾಸು ಸಹಾಯ ಒದಗಿಸಿ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಅನುವು ಮಾಡುವಂತೆ, ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ಸೂಚಿಸಿದ್ದಾರೆ. ಧಾರವಾಡ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಅವರು ಸಭೆ ನಡೆಸಿದರು. ವಿಮುಕ್ತ ದೇವದಾಸಿಯರ ಮಕ್ಕಳಿಗೆ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಸ್ವಾವಲಂಬನೆ ಯೋಜನೆಗಳನ್ನು ತಲುಪಿಸಬೇಕು. ಧಾರವಾಡ ಜಿಲ್ಲೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಯ ವೇಗ ವರ್ಧಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು.

<><><>

ಕಾನೂನು ಬಾಹಿರವಾಗಿ, ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆಗೈಯ್ಯುತ್ತಿದ್ದ ಆರೋಪದ ಮೇಲೆ, ಓರ್ವ ಮಹಿಳೆ ಸೇರಿದಂತೆ, ಒಟ್ಟು 7 ಜನರನ್ನು ಮೈಸೂರಿನ ಬನ್ನೂರು ಬಳಿಯ, ಹನುಗನಹಳ್ಳಿಯಲ್ಲಿ ಪೊಲೀಸರು ಬಂಧಿಸಿದ್ದಾರೆ. ಮೈಸೂರು ಜಿಲ್ಲಾ ಆರೋಗ್ಯಾಧಿಕಾರಿ ಡಾಕ್ಟರ್ ಕುಮಾರಸ್ವಾಮಿ, ಪ್ರಕರಣದ ಕುರಿತು ಮಾಹಿತಿ ನೀಡಿ ಖಚಿತ ಮಾಹಿತಿ ಆಧರಿಸಿ ಮೈಸೂರು ಹಾಗೂ ಮಂಡ್ಯ ಆರೋಗ್ಯ ಇಲಾಖೆಯ ಸಿಬ್ಬಂದಿ, ಪೊಲೀಸ್ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ ಬನ್ನೂರಿನ ಎಸ್.ಕೆ.ಆಸ್ಪತ್ರೆಯ ನರ್ಸ್ ಸೇರಿದಂತೆ 7 ಜನರನ್ನು ಬಂಧಿಸಿ ಪ್ರಕರಣ ದಾಖಲಿಸಿದ್ದಾರೆ ಎಂದರು.

<><><>

ಗೃಹ ಬಳಕೆಯ, ಎಲ್.ಪಿ.ಜಿ. ಸಿಲಿಂಡರ್‌ನ ಸುರಕ್ಷಿತ ಬಳಕೆ ಹಾಗೂ ಅಗ್ನಿ ಆಕಸ್ಮಿತದಂತಹ, ಅವಘಡ ಸಂಭವಿಸದಂತೆ ಕೈಗೊಳ್ಳಬೇಕಿರುವ ಮುಂಜಾಗ್ರತಾ ಕ್ರಮಗಳ ಕುರಿತು, ವಿಶೇಷ ಸಭೆ ಜರುಗಿತು. ವಿಜಯನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಸಭೆಯಲ್ಲಿ ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ ಪಾಲ್ಗೊಂಡು, ಅಡುಗೆ ಅನಿಲ ಸಿಲಿಂಡರ್ ಬಳಕೆದಾರರು ತುರ್ತು ಸಂದರ್ಭದಲ್ಲಿ 1–9–0–6 ಉಚಿತ ಸಹಾಯವಾಣಿಗೆ ಕರೆ ಮಾಡಿ ಸಹಾಯ ಪಡೆಯಬಹುದು ಎಂದರು.

<><><>

ಬೆಂಗಳೂರು–ಮುಂಬೈ ಸೂಪರ್‌ಫಾಸ್ಟ್ ರೈಲು ಹುಬ್ಬಳ್ಳಿ–ಧಾರವಾಡ ಮೂಲಕ ಸಂಚರಿಸಲಿದ್ದು, ತಮ್ಮ ಪ್ರಸ್ತಾವವನ್ನು ಅನುಮೋದಿಸಿದ ರೇಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಕೃತಜ್ಞತೆ ಸಲ್ಲಿಸಿದ್ದಾರೆ. ನೂತನ ಬೆಂಗಳೂರು–ಮುಂಬೈ ಸೂಪರ್‌ಫಾಸ್ಟ್ ರೈಲಿನಿಂದ ಮುಂಬೈ ಕರ್ನಾಟಕ ಭಾಗದ ಲಕ್ಷಾಂತರ ಜನರ ಸಂಚಾರ ಹಾಗೂ ವ್ಯಾಪಾರ–ವಹಿವಾಟಿಗೆ ಅನುವಾಗಲಿದೆ ಎಂದು ಎಕ್ಸ್ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><><>

ಹಿರಿಯ ಯಕ್ಷಗಾನ ಕಲಾವಿದರಾದ ರಂಗಮನೆಯ ಸುಜನಾ ಸುಳ್ಯ ಅವರು ಇಂದು ಮುಂಜಾನೆ ನಿಧನರಾದರು. ಅವರಿಗೆ 89 ವರ್ಷ ವಯಸ್ಸಾಗಿತ್ತು. ಸುಜನಾ ಸುಳ್ಯ ಎಂದೇ ಖ್ಯಾತರಾಗಿದ್ದ ಸುಳ್ಯ ಜಯರಾಮ ನಾವೂರು ಅವರು ಯಕ್ಷರಂಗದ ಬಹುಮುಖ ಪ್ರತಿಭೆಯ ಕಲಾವಿದರಾಗಿದ್ದರು. ಯಕ್ಷಗಾನ ಮತ್ತು ರಂಗಭೂಮಿ ಸೇರಿದಂತೆ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳಲ್ಲಿಯೂ ತೊಡಗಿಸಿಕೊಂಡಿದ್ದರು. ಮೃತರ ನಿಧನಕ್ಕೆ ನಾಡಿನ ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

<><><>

ಶಾಲಾ ವಾಹನವೊಂದು ದ್ವಿಚಕ್ರ ವಾಹನಕ್ಕೆ ಢಿಕ್ಕಿ ಹೊಡೆದ ಪರಿಣಾಮ ಇಬ್ಬರು ಮಕ್ಕಳು ಸೇರಿದಂತೆ ಒಟ್ಟು ನಾಲ್ವರು ಮೃತಪಟ್ಟು ಒಬ್ಬ ಬಾಲಕಿ ಗಂಭೀರವಾಗಿ ಗಾಯಗೊಂಡಿರುವ ದುರ್ಘಟನೆ ನಿನ್ನೆ ಸಂಜೆ ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕಿನ ಕೆಂಚಾರಲಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಬುರುಡುಗುಂಟೆ ಗ್ರಾಮದ ಬಳಿ ಸಂಭವಿಸಿದೆ. ಗಾಯಗೊಂಡಿರುವ ಬಾಲಕಿಯನ್ನು ಚಿಂತಾಮಣಿ ಸಾರ್ವಜನಿಕ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ.

<><><>

ತುಂಗಭದ್ರಾ ಜಲಾನಯನ ಪ್ರದೇಶಗಳಲ್ಲಿ ಹೆಚ್ಚಿನ ಮಳೆ ಸುರಿಯುತ್ತಿರುವ ಹಿನ್ನೆಲೆ, ಜಲಾಶಯಕ್ಕೆ 16 ಸಾವಿರದಿಂದ 20 ಸಾವಿರ ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, ಇಂದು ಸಂಜೆ 6 ಗಂಟೆಗೆ 20 ಸಾವಿರ ಕ್ಯೂಸೆಕ್ ನೀರನ್ನು ನದಿಗೆ ಹರಿ ಬಿಡಲಾಗುವುದು. ಈ ಹಿನ್ನೆಲೆ ಪಾತ್ರದ ಜನರು ಎಚ್ಚರಿಕೆಯಿಂದ ಇರಲು ತುಂಗಭದ್ರಾ ಜಲ ಮಂಡಳಿ ತಿಳಿಸಿದೆ.

<><><>

ಈಶಾನ್ಯ ಕರ್ನಾಟಕ ಶಿಕ್ಷಕರ ಮತಕ್ಷೇತ್ರದ ಮತದಾರರ ಪಟ್ಟಿ ಸಿದ್ಧಪಡಿಸುವ ಕಾರ್ಯ ನಡೆದಿದ್ದು, ಕಲಬುರಗಿ ಮಹಾನಗರದಲ್ಲಿ ವಾಸಿಸುವ ಅರ್ಹ ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಮತದಾರರ ಪಟ್ಟಿಗೆ ಹೆಸರು ನೋಂದಾಯಿಸುವಂತೆ ಮಹಾನಗರ ಪಾಲಿಕೆಯ ಆಯುಕ್ತರು ಹಾಗೂ ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಯಾಗಿರುವ ಅವಿನಾಶ ಶಿಂಧೆ ಕೋರಿದ್ದಾರೆ. ಕಲಬುರಗಿ ನಗರದಲ್ಲಿರುವ ಎಲ್ಲಾ ಅರ್ಹ ಶಿಕ್ಷಕರು ನಿಗಧಿತ ನಮೂನೆ 19 ರಲ್ಲಿ ಅರ್ಜಿ ಭರ್ತಿ ಮಾಡಿ ಪಾಲಿಕೆಯ ಶಾಖೆಯಲ್ಲಿ ಸಲ್ಲಿಸಿ ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೊಂದಾಯಿಸಿಕೊಳ್ಳಬೇಕೆಂದು ಮನವಿ ಮಾಡಲಾಗಿದೆ.

<><><>

ಹವಾಮಾನ ಇಲಾಖೆಯಿಂದ ನಾಳೆಯವರೆಗೆ ಆರೆಂಜ್ ಅಲರ್ಟ್ ಮುನ್ಸೂಚನೆ ನೀಡಿದ ಹಿನ್ನೆಲೆ, ಸಮುದ್ರ ತೀರದಲ್ಲಿ 45 ರಿಂದ 55 ಕಿಲೋ ಮೀಟರ್ ವೇಗದಲ್ಲಿ ಗಾಳಿ ಸಮೇತ ಮಳೆಯಾಗುವ ಸಾಧ್ಯತೆ ಇದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿ ಪ್ರಿಯ ತಿಳಿಸಿದ್ದಾರೆ. ಅಪಾಯಕಾರಿ ಮರಗಳಿರುವ ಮನೆಗಳಲ್ಲಿನ ಜನರು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಗೊಳ್ಳುವುದು, ಶಿಥಿಲವಾದ ಕಟ್ಟಡದಲ್ಲಿ ವಾಸಿಸುತ್ತಿರುವವರು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಗೊಳ್ಳುವುದು ಮತ್ತು ಸಣ್ಣ ಹಾಗೂ ಮಧ್ಯಮ ದೋಣಿಗಳು ಮೀನುಗಾರಿಕೆಗೆ ಇಳಿಯದಂತೆ ಸೂಚಿಸಿದ್ದಾರೆ. ಪ್ರವಾಸಿಗರು, ಹಾಗೂ ಸಾರ್ವಜನಿಕರು ನದಿ ಮತ್ತು ಸಮುದ್ರಕ್ಕೆ ಇಳಿಯದಂತೆ ಕಟ್ಟೆಚ್ಚರ ವಹಿಸಬೇಕು. ಸಮುದ್ರ ತೀರದಲ್ಲಿ ಯಾವುದೇ ಮನರಂಜನಾ ಚಟುವಟಿಕೆಗಳನ್ನು ಆಯೋಜಿಸಬಾರದು ಎಂದು ನಿರ್ದೇಶನ ನೀಡಿದ್ದಾರೆ. ತುರ್ತು ಸೇವೆಗಾಗಿ ನಿಯಂತ್ರಣ ಕೊಠಡಿ ಸಂಖ್ಯೆ 08382–229–857, ವಾಟ್ಸಾಪ್ ಸಂಖ್ಯೆ 94835–11015 ಸಂಪರ್ಕಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>